**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ :-** ಕೋವಿಡ್-19 ನಿಯಂತ್ರಣಕ್ಕಾಗಿ ಆಪ್ತಮಿತ್ರ-ಟೆಲಿಮೆಡಿಸಿನ್ ಸೇವೆಯನ್ನು ಪುನರಾರಂಭಿಸುವ ಬಗ್ಗೆ.

**ಓದಲಾಗಿದೆ:-** ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಏಕಕಡತ ಸಂಖ್ಯೆ: DD/EMRI/Restart Apthamitra/125/2020-21.

**ಪ್ರಸ್ತಾವನೆ**

ಮೇಲೆ ಓದಲಾದ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರಿಂದ ಸ್ವೀಕೃತವಾದ ಏಕಕಡತದಲ್ಲಿ ರಾಜ್ಯದಲ್ಲಿ ಕೋವಿಡ್-19 ಸಾಂಕ್ರಾಮಿಕವು ಉಲ್ಬಣಿಸುತ್ತಿರುವ ಹಿನ್ನೆಲೆಯಲ್ಲಿ ಆಪ್ತಮಿತ್ರ ಕಾರ್ಯಕ್ರಮ (14410)ದಡಿಯಲ್ಲಿ Call for Care ಚಟುವಟಿಯನ್ನು ಪುನರಾರಂಭಿಸುವುದನ್ನು ಪ್ರಸ್ತಾಪಿಸುತ್ತಾ, ಸಾಂಕ್ರಾಮಿಕವು ತ್ವರಿತಗತಿಯಲ್ಲಿ ಏರುತ್ತಿರುವುದರಿಂದ ಸದರಿ ಸೇವೆಯನ್ನು ಪಡೆಯಲು ಟೆಂಡರ್ ಪ್ರಕ್ರಿಯೆಯನ್ನು ನಿರ್ವಹಿಸಲು ಕಾಲಾವಕಾಶದ ಕೊರತೆ ಇರುವುದರಿಂದ ಈ ಹಿಂದೆ ತೃಪ್ತಿಕರವಾದ ಸೇವೆಯನ್ನು ಒದಗಿಸಿರುವ ಹಾಗೂ ತಾಂತ್ರಿಕವಾಗಿ ಸಮರ್ಥರಾಗಿರುವ M/S Rural shores (BBMP ವ್ಯಾಪ್ತಿಗಾಗಿ) ಮತ್ತು M/S Grassroots (ರಾಜ್ಯದ ಉಳಿದ ಪ್ರದೇಶಗಳಿಗಾಗಿ) ಸಂಸ್ಥೆಗಳಿಂದ ಪ್ರತಿದಿನ 5500 ಪ್ರಕರಣಗಳನ್ನು ಗಣನೆಗೆ ತೆಗೆದುಕೊಂಡಂತೆ ಅಂದಾಜಿಸಿ 220 ಜನ ಸಿಬ್ಬಂದಿಗಳಂತೆ (Azure cloud rental cost ಸೇರಿ) ನಿರ್ವಹಣೆ ಮಾಡಲು ಪ್ರತಿ ತಿಂಗಳಿಗೆ ಅಂದಾಜು ಮೊತ್ತ ರೂ.93,34,400/-ಗಳಂತೆ 06 ತಿಂಗಳ ಅವಧಿಗೆ ಒಟ್ಟು ರೂ.560.06 ಲಕ್ಷಗಳ ವೆಚ್ಚದಲ್ಲಿ ಆಪ್ತಮಿತ್ರ Call for care ಸೆಂಟರ್‌ಗಳನ್ನು ಪುನರಾರಂಭಿಸಲು ಕೆಟಿಪಿಪಿ ಕಾಯ್ದೆಯ ಕಲಂ 4(a)ರಡಿ ಅನುಮೋದನೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 109 ಎಫ್‌ಪಿಇ 2020,**
**ಬೆಂಗಳೂರು,ದಿನಾಂಕ: 09/04/2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ರಾಜ್ಯದಲ್ಲಿ ಕೋವಿಡ್-19 ಸಾಂಕ್ರಾಮಿಕವು ಉಲ್ಬಣಿಸುತ್ತಿರುವ ಹಿನ್ನೆಲೆಯಲ್ಲಿ ಆಪ್ತಮಿತ್ರ ಕಾರ್ಯಕ್ರಮ (14410)ದಡಿಯಲ್ಲಿ Call for Care ಚಟುವಟಿಯನ್ನು M/S Rural shores (BBMP ವ್ಯಾಪ್ತಿಗಾಗಿ) ಮತ್ತು M/S Grassroots (ರಾಜ್ಯದ ಉಳಿದ ಪ್ರದೇಶಗಳಿಗಾಗಿ) ಸಂಸ್ಥೆಗಳಿಂದ ಪ್ರತಿದಿನ ಅಂದಾಜು 5500 ಪ್ರಕರಣಗಳನ್ನು ಗಣನೆಗೆ ತೆಗೆದುಕೊಂಡಂತೆ 220 ಜನ ಸಿಬ್ಬಂದಿಗಳೊಂದಿಗೆ (Azure cloud rental cost ಸೇರಿ) ನಿರ್ವಹಣೆ ಮಾಡಲು ಮಾಹೆಯಾನ ಅಂದಾಜು ಮೊತ್ತ ರೂ.93,34,400/-ಗಳಂತೆ 06 ತಿಂಗಳ ಅವಧಿಗೆ ಒಟ್ಟು ರೂ.560.06 ಲಕ್ಷ (ಐನೂರ ಅರವತ್ತು ಲಕ್ಷದ ಆರು ಸಾವಿರ ರೂಪಾಯಿಗಳು ಮಾತ್ರ)ಗಳ ವೆಚ್ಚದಲ್ಲಿ ಪುನರಾರಂಭಿಸಲು ಕೋವಿಡ್-19 ಸಾಂಕ್ರಾಮಿಕದ ತುರ್ತು ಹಿನ್ನಲೆಯಲ್ಲಿ ಕೆಟಿಪಿಪಿ ಕಾಯ್ದೆಯ ಕಲಂ 4(a)ರಡಿ ಅನುಮೋದನೆ ನೀಡಿದೆ ಹಾಗೂ ಇದಕ್ಕೆ ತಗಲುವ ವೆಚ್ಚವನ್ನು SDRF ನಿಧಿಯಿಂದ ಭರಿಸತಕ್ಕದ್ದು.

ಸರ್ಕಾರವು ಬಿಡುಗಡೆ ಮಾಡಿರುವ ಅನುದಾನವನ್ನು ಯಾವ ಉದ್ದೇಶಕ್ಕಾಗಿ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಮಾತ್ರ ಬಳಸಿಕೊಳ್ಳುವ ಷರತ್ತುಗಳಿಗೊಳಪಟ್ಟಿದೆ ಹಾಗೂ ಉತ್ತಮ ಗುಣಮಟ್ಟದ ಸೇವೆಯನ್ನು ಸಮಂಜಸ ದರದಲ್ಲಿ ಪಡೆಯಲು ಕ್ರಮವಹಿಸತಕ್ಕದ್ದು.

ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ: ಆಕುಕ 49 ಎಫ್‌ಪಿಆರ್ 2020, ದಿನಾಂಕ:17.03.2020ರಲ್ಲಿ ಇಲಾಖಾ ಅಪರ ಮುಖ್ಯ ಕಾರ್ಯದರ್ಶಿಯವರಿಗೆ ಕೆ.ಟಿ.ಪಿ.ಪಿ ಕಾಯ್ದೆ 1999ರ ಕಲಂ 4(a)ರಡಿ ನೀಡಿರುವ ಆರ್ಥಿಕ ಅಧಿಕಾರ ಪ್ರತ್ಯಾಯೋಜನೆ ಮೇರೆಗೆ ಹಾಗೂ ಕಾರ್ಯಪಡೆ ಸಮಿತಿ ಸಭೆಯ ಘಟನೋತ್ತರ ಅನುಮೋದನೆ ಪಡೆಯುವ ಷರತ್ತಿಗೊಳಪಟ್ಟು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

09/4/2021

(**ಡಿ.ಧನಂಜಯ**)
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
(ಕುಟುಂಬ ಕಲ್ಯಾಣ)

09/04

**ಇವರಿಗೆ :**

1. ಪ್ರಧಾನ ಮಹಾಲೇಖಪಾಲರು (ಜೆ & ಎಸ್.ಎಸ್.ಎ) ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ" ಅಂಚೆ ಪೆಟ್ಟಿಗೆ ಸಂ:5398, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಜೆ & ಎಸ್.ಎಸ್.ಎ) ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ"ಅಂಚೆ ಪೆಟ್ಟಿಗೆ ಸಂ:5398, (ಲೆಕ್ಕ ಮತ್ತು ತನಿಖೆ), ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಲೆಕ್ಕ ಮತ್ತು ತನಿಖೆ), ಕರ್ನಾಟಕ ಅಂಚೆಪೆಟ್ಟಿಗೆ ಸಂ:5329, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ), ಬೆಂಗಳೂರು.
5. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು.
6. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು.
7. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
8. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು.
9. ಮುಖ್ಯ ಆರ್ಥಿಕ ಅಧಿಕಾರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು.
10. ಶಾಖಾ ರಕ್ಷಾ ಕಡತ/ ಬಿಡಿ ಪ್ರತಿಗಳು.

**ಪ್ರತಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ-2ರವರ ಆಪ್ತ ಸಹಾಯಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು